# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಶ್ರೀ ಪದ್ಮನಾಭ ಜೋಶಿ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಸುರಪುರ ಇವರ ವಿರುದ್ಧ ಶಿಸ್ತು ಕ್ರಮ - ಪ್ರಕರಣವನ್ನು ಮಾನ್ಯ ಉಪಲೋಕಾಯುಕ್ತ-1 ರವರಿಗೆ ವಹಿಸುವ ಬಗ್ಗೆ - ಆದೇಶ.

ಓದಲಾಗಿದೆ:-

1) ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ. Compt/ Uplok/ GLB-152 / 2010/ARE-5 ದಿನಾಂಕ. 31.07.2017.

2) ಮಾನ್ಯ ಉಪ ಲೋಕಾಯುಕ್ತ-1 ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(3)ರಡಿಯಲ್ಲಿ ಸಲ್ಲಿಸಿರುವ ವರದಿ ಸಂಖ್ಯೆ Compt/ Uplok/ GLB-152 / 2010/ARE-5 ದಿನಾಂಕ. 27.07.2017.

-----

## ಪ್ರಸ್ತಾವನೆ

ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ರವರು ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ 31.07.2017ರ ಪತ್ರದ ಜೊತೆ ಮಾನ್ಯ ಉಪಲೋಕಾಯುಕ್ತ-1ರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಸೆಕ್ಷನ್ 12 (3) ರನ್ವಯ ನೀಡಿರುವ ವರದಿಯನ್ನು ಸಂಬಂಧಿಸಿದ ದಾಖಲೆಗಳೊಂದಿಗೆ ಕಳುಹಿಸುತ್ತಾ, ಮಾನ್ಯ ಉಪ ಲೋಕಾಯುಕ್ತ -1ರವರ ಶಿಫಾರಸ್ಸಿನಂತೆ ಕ್ರಮವಹಿಸಲು ಕೋರಿರುತ್ತಾರೆ.

ಮಾನ್ಯ ಉಪಲೋಕಾಯುಕ್ತ-1ರವರು ಲೋಕಾಯುಕ್ತ ಕಾಯ್ದೆ ಕಲಂ 12 (3)ರಂತೆ ಸಲ್ಲಿಸಿರುವ ವರದಿ ಹಾಗೂ ಲಗತ್ತಿಸಿರುವ ದಾಖಲೆಗಳನ್ನು ಸರ್ಕಾರವು ಪರಿಶೀಲಿಸಿದೆ. ಶ್ರೀ ನಿಂಗಪ್ಪ ಶಿವಲಿಂಗಪ್ಪ ಹೊಸಮನಿ, ಯಕ್ತಾಪುರ ಗ್ರಾಮ, ಸುರಪುರ ತಾಲ್ಲೂಕು, ಯಾದಗಿರಿ ಜಿಲ್ಲೆ ಇವರು ಶ್ರೀ ಪದ್ಮನಾಭ ಜೋಶಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಸುರಪುರ ರವರು ಕುಡಿಯುವ ನೀರಿನ ಪೈಪ್‌ಲೈನ್ ಕಾಮಗಾರಿ ಹಾಗೂ ಗುತ್ತಿಬಸವೇಶ್ವರ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿನ ಕಾಮಗಾರಿಯನ್ನು ಅನುಷ್ಠಾನಗೊಳಿಸದೇ ಸುಳ್ಳು ದಾಖಲೆಗಳನ್ನು ಸೃಷ್ಟಿಸಿ ಹಣ ದುರುಪಯೋಗಪಡಿಸಿಕೊಂಡಿರುತ್ತಾರೆಂದು ತಿಳಿಸಿ, ಆದ್ದರಿಂದ ಇವರ ವಿರುದ್ಧ ಸೂಕ್ತ ಕ್ರಮ ಜರುಗಿಸುವಂತೆ ಕರ್ನಾಟಕ ಲೋಕಾಯುಕ್ತ ಕಚೇರಿಯಲ್ಲಿ ದೂರನ್ನು ಸಲ್ಲಿಸಿರುತ್ತಾರೆ.

--

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ಆಪಾದಿತ ಅಧಿಕಾರಿಯಿಂದ ಪಡೆಯಲಾಗಿರುವ ಆಕ್ಷೇಪಣೆಯಲ್ಲಿ ಸದರಿ ಕಾಮಗಾರಿಗಳನ್ನು ಬಹಳ ಹಿಂದೆಯೇ ಅನುಷ್ಠಾನಗೊಳಿಸಿ ಹಣವನ್ನು ಪಾವತಿಸಲಾಗಿದೆಯೆಂದು ಹಾಗೂ ಇದರಲ್ಲಿ ಯಾವುದೇ ಹಣ ದುರುಪಯೋಗ ಪಡಿಸಿಕೊಂಡಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಸದರಿ ದೂರಿಗೆ ಸಂಬಂಧಿಸಿದಂತೆ ಲೋಕಾಯುಕ್ತ ಕಚೇರಿಯು ತನಿಖೆ ಕೈಗೊಂಡು ಸಲ್ಲಿಸಿರುವ ವರದಿಯಲ್ಲಿ ಈ ಕೆಳಕಂಡ ಅಂಶಗಳು ವ್ಯಕ್ತವಾಗುತ್ತವೆ :-

1. ಐನಾಪುರ ಶಾಲೆಯ ಶೌಚಾಲಯದ ಟಿನ್ ಶೀಟ್‌ಗಳು ಹಾಗೂ ಮಲ್ಕಾಪುರ ಶಾಲೆಯ ಶೌಚಾಲಯದ ಬಾಗಿಲು ಮತ್ತು ಟಿನ್ ಶೀಟ್‌ಗಳು ಕಳೆದು ಹೋಗಿರುತ್ತವೆ.

2. 2008ರಲ್ಲಿ ಕಚ್ಚಾಪುರ ಗ್ರಾಮದಲ್ಲಿ ನಿರ್ಮಿಸಲಾದ ಶೌಚಾಲಯವು ಅಸ್ತಿತ್ವದಲ್ಲಿರುವುದಿಲ್ಲ.

3. ಯಕ್ತಾಪುರ, ಬೊಮ್ಮನಹಳ್ಳಿ, ಹಲಾಲ ಮತ್ತು ಚಿಂಚೋಳಿ ಗ್ರಾಮಗಳಲ್ಲಿ ಕೈಗೊಳ್ಳಲಾದ ಸಿ.ಸಿ.ರಸ್ತೆಗಳು ಹಾಳಾಗಿರುವುದು ಹಾಗೂ ಕುಸಿತಕ್ಕೊಳಗಾಗಿರುವುದು ಕಂಡುಬಂದಿದೆ.

ಮಾನ್ಯ ಉಪ ಲೋಕಾಯುಕ್ತ-1ರವರು ಸದರಿ ಪ್ರಕರಣಕ್ಕೆ ಸಂಬಂಧಿಸಿದ ದೂರು, ತನಿಖಾ ವರದಿ, ಆಪಾದಿತರು ಸಲ್ಲಿಸಿರುವ ಆಕ್ಷೇಪಣೆಗಳು ಮತ್ತು ದಾಖಲಾತಿಗಳನ್ನು ಪರಿಶೀಲಿಸಿದ್ದು, ಸದರಿ ಪ್ರಕರಣದಲ್ಲಿ ಕಾಮಗಾರಿಗಳನ್ನು ಅನುಮೋದಿತ ಅಂದಾಜು ಪಟ್ಟಿಯಂತೆ ನಿರ್ವಹಿಸದೇ ಕಳಪೆಯಾಗಿ ನಿರ್ವಹಿಸಿರುವುದು ಕಂಡುಬರುವುದರಿಂದ ಶ್ರೀ ಪದ್ಮನಾಭ ಜೋಶಿ, ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಸುರಪುರ ಇವರ ವಿರುದ್ಧದ ನಡವಳಿಯನ್ನು ಕೈ ಬಿಡಲು ಸೂಕ್ತ / ಸಮಂಜಸ / ಸಮಾಧಾನಕರ ಕಾರಣ ಕಂಡುಬರುತ್ತಿಲ್ಲವೆಂದೂ, ಸದರಿಯವರು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ನಡೆಸುವ ಸಲುವಾಗಿ ಪ್ರಕರಣವನ್ನು ತಮಗೆ ವಹಿಸುವಂತೆ ಮಾನ್ಯ ಉಪ ಲೋಕಾಯುಕ್ತ-1ರವರು ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ಪ್ರಕರಣಕ್ಕೆ ಸಂಬಂಧಿಸಿದ ಎಲ್ಲಾ ಮಾಹಿತಿ ಹಾಗೂ ದಾಖಲೆಗಳನ್ನು ಪರಿಶೀಲಿಸಿರುತ್ತದೆ. ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕಿನ ಐನಾಪುರ, ಮಲ್ಕಾಪುರ ಹಾಗೂ ಕಚ್ಚಪುರ ಗ್ರಾಮಗಳಲ್ಲಿನ ಶೌಚಾಲಯ ಕಾಮಗಾರಿಗಳನ್ನು, ಯಕ್ತಾಪುರ, ಬೊಮ್ಮನಹಳ್ಳಿ, ಹಲಾಲ ಮತ್ತು ಚಿಂಚೋಳಿ ಗ್ರಾಮಗಳಲ್ಲಿನ ಸಿ.ಸಿ.ರಸ್ತೆ ಕಾಮಗಾರಿಗಳನ್ನು ಅನುಮೋದಿತ ಅಂದಾಜು ಪಟ್ಟಿಯಂತೆ ನಿರ್ವಹಿಸದೇ ಕಳಪೆಯಾಗಿ ನಿರ್ವಹಿಸಿರುವುದು ದಾಖಲೆಗಳಿಂದ ಕಂಡುಬರುತ್ತದೆ. ಹಾಗಾಗಿ ಶ್ರೀ ಪದ್ಮನಾಭ ಜೋಶಿ, ಕಿರಿಯ ಇಂಜಿನಿಯರ್ ರವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯ ನಿರ್ವಹಣೆಯಲ್ಲಿ ಪರಿಪೂರ್ಣ ಪ್ರಾಮಾಣಿಕತೆ ಹಾಗೂ ಸಂಪೂರ್ಣ ನಿಷ್ಠೆ ತೋರದೆ ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ 3(1)ನ್ನು ಉಲ್ಲಂಘಿಸಿ ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡುಬರುವುದರಿಂದ ಸದರಿಯವರ ವಿರುದ್ಧದ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ ನಡೆಸುವುದು ಅವಶ್ಯವೆಂದು ಕಂಡುಬರುತ್ತದೆ.

ಆದ್ದರಿಂದ, ಶ್ರೀ ಪದ್ಮನಾಭ ಜೋಶಿ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಸುರಪುರ ಇವರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ, ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳ ನಿಯಮ 11ರಂತೆ ವಿವರವಾದ ಇಲಾಖಾ ವಿಚಾರಣೆ ನಡೆಸುವ ಸಲುವಾಗಿ ಪ್ರಕರಣವನ್ನು ಮಾನ್ಯ ಉಪ ಲೋಕಾಯುಕ್ತ-1ರವರಿಗೆ ವಹಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ

**ಆದೇಶ ಸಂಖ್ಯೆ : ಗ್ರಾಅಪ 89 ಇಎನ್‌ಕ್ಯೂ 2017 ಬೆಂಗಳೂರು,**
**ದಿನಾಂಕ. 11.09.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಶ್ರೀ ಪದ್ಮನಾಭ ಜೋಶಿ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಸುರಪುರ ಇವರ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸುವ ಸಲುವಾಗಿ ಪ್ರಕರಣವನ್ನು ಸದರಿ ನಿಯಮಗಳ ನಿಯಮ 14(ಎ)ರ ಅನುಸಾರ ಮಾನ್ಯ ಉಪಲೋಕಾಯುಕ್ತ -1 ರವರಿಗೆ ವಹಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

11/09/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಅ ಮತ್ತು ಇ) ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ.
7. ಶ್ರೀ ಪದ್ಮನಾಭ ಜೋಶಿ, ಅಂದಿನ ಕಿರಿಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ, ಸುರಪುರ ಇವರಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಯಾದಗಿರಿ ಇವರ ಮುಖಾಂತರ.
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು-ಬಿ&ಸಿ).
10. ಸರ್ಕಾರದ ಅಧೀನ ಕಾರ್ಯದರ್ಶಿ, ಗ್ರಾಮ ಪಂಚಾಯತ್ ಶಾಖೆ, ಗ್ರಾ.ಅ.ಪಂ.ರಾಜ್ ಇಲಾಖೆ.
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ / ಉಪ ಕಾರ್ಯದರ್ಶಿ (ಆಡಳಿತ) ಇವರ ಆಪ್ತ ಕಾರ್ಯದರ್ಶಿ / ಆಪ್ತ ಸಹಾಯಕರು.
12. ಹೆಚ್ಚುವರಿ ಪ್ರತಿ : ರಕ್ಷಾ ಕಡತ : ಕಂಪ್ಯೂಟರ್ ಸೆಲ್.